## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯದ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000/-ಗಳನ್ನು ನೀಡುವ ಗೃಹಲಕ್ಷ್ಮಿ ಯೋಜನೆಯ ಸೌಲಭ್ಯವನ್ನು ಲಿಂಗತ್ವ ಅಲ್ಪಸಂಖ್ಯಾತರಿಗೂ ವಿಸ್ತರಿಸಿ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಮಮಇ 70 ಮಮಅ 2023, ದಿನಾಂಕ: 06-06-2023.
2. ಸರ್ಕಾರದ ಆದೇಶ ಸಂಖ್ಯೆ: ಮಮಇ 70 ಮಮಅ 2023 (ಭಾಗ-14), ದಿನಾಂಕ: 17-07-2023.
3. ಸರ್ಕಾರದ ಆದೇಶ ಸಂಖ್ಯೆ: ಮಮಇ 70 ಮಮಅ 2023 (ಭಾಗ-15), ದಿನಾಂಕ: 17-07-2023.
4. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಏಕಕಡತ ಸಂಖ್ಯೆ: WCD/SS/BUD/11/2023-SS.

**********

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ: 06-06-2023ರ ಆದೇಶದಲ್ಲಿ ಕರ್ನಾಟಕ ರಾಜ್ಯದ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000/-ಗಳನ್ನು ನೀಡುವ 'ಗೃಹಲಕ್ಷ್ಮಿ ಯೋಜನೆ'ಯನ್ನು 2023-24ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಮಮಇ 70 ಮಮಅ 2023, ದಿನಾಂಕ: 06-06-2023ರ ಆದೇಶವನ್ನು ಮುಂದುವರೆಸಿ, ಕರ್ನಾಟಕ ರಾಜ್ಯದ ಕುಟುಂಬದಲ್ಲಿನ ಯಜಮಾನಿ ಮಹಿಳೆಗೆ "ಗೃಹಲಕ್ಷ್ಮಿ" ಯೋಜನೆಯ ಸೌಲಭ್ಯವನ್ನು ಫಲಾನುಭವಿಗಳು ಇಚ್ಛಿಸಿದ್ದಲ್ಲಿ ಅವರ ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆ ಬದಲು ಕುಟುಂಬದ ಯಜಮಾನಿಯ ಹೆಸರಿನಲ್ಲಿರುವ Non Aadhar Seeded Bank Accountಗೂ ಸಹ ಆರ್.ಟಿ.ಜಿ.ಎಸ್. ಮೂಲಕ ಪ್ರತಿ ತಿಂಗಳು ರೂ. 2000/-ಗಳನ್ನು ನೀಡಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆದೇಶದಲ್ಲಿ ರಾಜ್ಯದ ಕುಟುಂಬದಲ್ಲಿನ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000/-ಗಳನ್ನು ನೀಡುವ "ಗೃಹಲಕ್ಷ್ಮಿ" ಯೋಜನೆಯನ್ನು ಮಾರ್ಗಸೂಚಿಯನ್ವಯ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಏಕಕಡತದಲ್ಲಿ 2023-24 ನೇ ಸಾಲಿನ ಆಯವ್ಯಯದ ಕಂಡಿಕೆ 129 ರಲ್ಲಿ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಬಿಸಿಯೂಟ ತಯಾರಕರು, ಲಿಂಗತ್ವ ಅಲ್ಪಸಂಖ್ಯಾತರು ಮತ್ತು ಮಾಜಿ ದೇವದಾಸಿಯರೂ ಸಹಾ ಗೃಹಲಕ್ಷ್ಮಿ ಯೋಜನೆಯ ವ್ಯಾಪ್ತಿಗೆ ಸೇರುತ್ತಾರೆ ಎಂದು ಘೋಷಿಸಲಾಗಿದೆ. ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಬಿಸಿಯೂಟ ತಯಾರಕರು ಪಡಿತರ ಚೀಟಿಯಲ್ಲಿ ಕುಟುಂಬದ ಯಜಮಾನಿಯಾಗಿದ್ದು, ಆಕೆ ಹಾಗೂ ಆಕೆಯ ಪತಿ ಆದಾಯ ತೆರಿಗೆ ಹಾಗೂ GST Returns ಪಾವತಿದಾರರಾಗದಿದ್ದಲ್ಲಿ ಮತ್ತು ಮಾಜಿ ದೇವದಾಸಿಯರೂ ಪಡಿತರ ಚೀಟಿಯಲ್ಲಿ ಕುಟುಂಬದ ಯಜಮಾನಿಯಾಗಿದ್ದು, ಅವರು ಆದಾಯ ತೆರಿಗೆ ಹಾಗೂ GST Returns ಪಾವತಿದಾರರಾಗದಿದ್ದಲ್ಲಿ ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಂತೆ ಗೃಹಲಕ್ಷ್ಮಿ ಯೋಜನೆಗೆ ಅರ್ಹರಾಗಿರುತ್ತಾರೆ. ಆದರೆ ಲಿಂಗತ್ವ ಅಲ್ಪಸಂಖ್ಯಾಂತರು ಈ ಯೋಜನೆಯಲ್ಲಿ ಒಳಗೊಂಡಿರುವುದಿಲ್ಲ. ಅದರಂತೆ, ಆಯವ್ಯಯದ ಕಂಡಿಕೆ 129 ರಲ್ಲಿ ಘೋಷಿಸಿರುವಂತೆ ಗೃಹಲಕ್ಷ್ಮಿ ಯೋಜನೆಯಡಿ ರೂ. 2000/-ಗಳನ್ನು ನೀಡುವ ಯೋಜನೆಯನ್ನು ಲಿಂಗತ್ವ ಅಲ್ಪಸಂಖ್ಯಾತರಿಗೂ ಸಹ ಒದಗಿಸುವಂತೆ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಲಿಂಗತ್ವ ಅಲ್ಪಸಂಖ್ಯಾತರಿಗೂ ಈ ಯೋಜನೆಯನ್ನು ವಿಸ್ತರಿಸಲು ತೀರ್ಮಾನಿಸಿ ಅದರಂತೆ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 70 ಮಮಅ 2023 (ಭಾಗ-20),**
**ಬೆಂಗಳೂರು, ದಿನಾಂಕ: 18-07-2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (2)ರಲ್ಲಿನ ಆದೇಶಗಳನ್ನು ಮುಂದುವರೆಸಿ, ಕರ್ನಾಟಕ ರಾಜ್ಯದ ಕುಟುಂಬದಲ್ಲಿನ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000/-ಗಳನ್ನು ನೀಡುವ "ಗೃಹಲಕ್ಷ್ಮಿ" ಯೋಜನೆಯ ಸೌಲಭ್ಯವನ್ನು ಲಿಂಗತ್ವ ಅಲ್ಪಸಂಖ್ಯಾತರಿಗೂ ನೀಡಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

N.S. Khatavker
18/07/2023

**(ನಿರ್ಮಲಾ ಎಸ್. ಖಟಾವ್‌ಕರ್)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560 001.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬಹುಮಹಡಿ ಕಟ್ಟಡ, ಬೆಂಗಳೂರು.
4. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
5. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು,
6. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
7. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಮುಖಾಂತರ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ವಿಧಾನಸೌಧ, ಬೆಂಗಳೂರು.
9. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.